**ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಜೇವರ್ಗಿ**

**Misc.No.3/2021**

**ಸಾಕ್ಷಿಗೆ ದಿನಾಂಕ 03-02-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿಯ ಹೆಸರು | ಃ | ಮಲ್ಲಪ್ಪ | PW-1 |
| ತಂದೆ ಹೆಸರು | ಃ | ಬಸಪ್ಪ ಚಿಗರಿ | |
| ವಯಸ್ಸು | ಃ | 54 ವರ್ಷ | |
| ಉದ್ಯೋಗ | ಃ | ಒಕ್ಕಲುತನ | |
| ವಾಸಸ್ಥಳ | ಃ | ಯಾತನೂರ | |

**ಮುಖ್ಯ ವಿಚಾರಣೆ ಶ್ರೀ ಜಿ.ಎ.ಪಿ. ಅರ್ಜಿದಾರರ ಪರ ವಕೀಲರಿಂದ**

ಮುಖ್ಯ ವಿಚಾರಣೆ ಬದಲಾಗಿ ನಾನು ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆ ಬದಲಾಗಿ ಸಲ್ಲಿಸಿರುವ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ.

ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ಸಲ್ಲಿಸಿ ಕಲಂ 18(1) ರ ಅಡಿಯಲ್ಲಿ ನೀಡಿದ ಅರ್ಜಿಯ ಸ್ವೀಕೃತಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ನಾನು ವಿಶೇಷ ಭೂಸ್ವಾಧೀನಾಧಿಕಾರಿಗಳು ಭೀಮರಾಯನಗುಡಿ ಇವರಿಗೆ ನೀಡಿದ ಇನ್ನೊಂದು ಅರ್ಜಿಯ ಸ್ವೀಕೃತಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಅರ್ಜಿದಾರರ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಮುಂದುವರೆದ ಮುಖ್ಯ ವಿಚಾರಣೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು, ಜೇವರ್ಗಿ